ಪಕ್ಷಿಧಾಮಕ್ಕೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವುದು

124 (115) ಶ್ರೀಮತಿ ಕಲ್ಪನಾ ಸಿದ್ದರಾಜು (ಮದ್ದೂರು): ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಕೊಕ್ಕರೆ ಬೆಳ್ಳೂರು ಪಕ್ಷಿಧಾಮವನ್ನು ವೀಕ್ಷಿಸಲು ಸ್ವದೇಶ ಮತ್ತು ವಿದೇಶಗಳಿಂದ ಸಾವಿರಾರು ಜನ ಆಗಮಿಸುತ್ತಿದ್ದು, ಈ ಗ್ರಾಮವು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಈ ಗ್ರಾಮದ ಅಭಿವೃದ್ಧಿಗಾಗಿ ಇದುವರೆವಿಗೂ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು;

ಇ) ಈ ಗ್ರಾಮದಲ್ಲಿ ಯಾವ ಯಾವ ಸೌಕರ್ಯಗಳನ್ನು ಕಲ್ಪಿಸಲಾಗಿದೆ; (ಪೂರ್ಣ ಮಾಹಿತಿ ನೀಡುವುದು)

ಈ) ಈ ಗ್ರಾಮದ ಎಲ್ಲಾ ರಸ್ತೆಗಳು ಕಚ್ಚಾ ರಸ್ತೆಗಳಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಈ ರಸ್ತೆಗಳನ್ನು ಡಾಂಬರು ರಸ್ತೆಗಳನ್ನಾಗಿ ಮಾರ್ಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಜಿ. ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು):

ಅ) ಹೌದು.

ಆ) ಪ್ರವಾಸೋದ್ಯಮ ಇಲಾಖೆಯ ಮೂಲಕ ಕೈಗೆತ್ತಿಕೊಂಡಿರುವ ಕಾಮಗಾರಿಗಳಿಗೆ ರೂ. 77.17 ಲಕ್ಷಗಳನ್ನು ವಿನಿಯೋಗಿಸಲಾಗಿದೆ ಹಾಗೂ ಪೂರ್ಣಗೊಳಿಸಲಾಗಿದೆ.

ಇದರ ಜೊತೆಗೆ ಕೊಕ್ಕರೆಬೆಳ್ಳೂರು ತಲುಪುವ 13 ಕಿ.ಮೀ. ರಸ್ತೆಯ ಪೈಕಿ 8 ಕಿ.ಮೀ. ರಸ್ತೆಯನ್ನು ನಬಾರ್ಡ್ ಧನಸಹಾಯದಲ್ಲಿ ರೂ. 328.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಪೂರ್ಣಗೊಳಿಸಲಾಗಿದೆ. ಉಳಿದ 5 ಕಿ.ಮೀ. ಉದ್ದ ರಸ್ತೆಯನ್ನು ಪೂರ್ಣಗೊಳಿಸಲು ನಬಾರ್ಡ್ ಧನಸಹಾಯ ಕೋರಲಾಗಿದೆ.

ಇ) ಕೊಕ್ಕರೆಬೆಳ್ಳೂರು ಪಕ್ಷಿಧಾಮ ವೀಕ್ಷಿಸಲು ದಿನನಿತ್ಯ ದೇಶಿಯ ಹಾಗೂ ವಿದೇಶಿಯ ಪ್ರವಾಸಿಗರು ಕೊಕ್ಕರೆಬೆಳ್ಳೂರಿಗೆ ಭೇಟಿ ನೀಡುವರು. ಈ ಪಕ್ಷಿಧಾಮದ ಬಳಿ ಇಂಟರ್ ಪ್ರಿಟೇಷನ್ ಕೇಂದ್ರ, ಟ್ರೀ ಪ್ಲಾಂಟಿಂಗ್, ವಾಟರ್

ಸಪ್ಲೈ ಪರಗೊಲ, ಆಂಪಿ ಥಿಯೇಟರ್ ಹಾಗೂ ಗ್ರಾಮದ ಅಪ್ರೋಚ್ ರಸ್ತೆಯ ಎರಡೂ ಕಡೆ ಬಾಕ್ಸ್ ಡ್ರೈನ್‌ಗಳನ್ನು ಪ್ರವಾಸೋದ್ಯಮ ಇಲಾಖೆವತಿಯಿಂದ ನಿರ್ಮಿಸಿ ಪೂರ್ಣಗೊಳಿಸಲಾಗಿದೆ. ಕೊಕ್ಕರೆ ಬೆಳ್ಳೂರು ಗ್ರಾಮಕ್ಕೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು ಇಲಾಖೆಯ ವ್ಯಾಪ್ತಿಗೆ ಬರುವುದಿಲ್ಲ.

ಈ) ಗ್ರಾಮ ಆಂತರಿಕ ರಸ್ತೆ ಅಭಿವೃದ್ಧಿ ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಯಲ್ಲಿ ಬರುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಆಶ್ರಯ ಮನೆಗಳ ನಿರ್ಮಾಣಕ್ಕೆ ಭೂಸ್ವಾಧೀನಪಡಿಸಿಕೊಂಡಿರುವುದು

125 (117) ಶ್ರೀಮತಿ ಕಲ್ಪನಾ ಸಿದ್ದರಾಜು (ಮದ್ದೂರು): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮದ್ದೂರು ಟೌನ್ ' ಶಿವಪುರದ ಬಳಿ ಆಶ್ರಯ ಮನೆಗಳ ನಿರ್ಮಾಣಕ್ಕಾಗಿ ಸರ್ಕಾರ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನಪಡಿಸಿಕೊಂಡಿದೆ;

ಆ) ಹಾಗಿದ್ದಲ್ಲಿ ಸ್ವಾಧೀನಪಡಿಸಿಕೊಂಡಿರುವ ಜಮೀನಿನಲ್ಲಿ ಎಷ್ಟು ಆಶ್ರಯ ಮನೆಗಳನ್ನು ನಿರ್ಮಾಣ ಮಾಡಲು ಮಂಜೂರಾತಿ ನೀಡಲಾಗಿದೆ ಮತ್ತು ಆಶ್ರಯ ಮನೆಗಳ ನಿರ್ಮಾಣಕ್ಕಾಗಿ ಇದುವರೆಗೂ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು; (ವಿವರಗಳನ್ನು ನೀಡುವುದು)

ಇ) ಆಶ್ರಯ ಮನೆಗಳ ನಿರ್ಮಾಣಕ್ಕಾಗಿ ಗುರುತಿಸಿರುವ ಬಡಾವಣೆಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ;

ಈ) ಹಾಗಿದ್ದಲ್ಲಿ, ಈ ಬಡಾವಣೆಗೆ ಮೂಲಸೌಲಭ್ಯವನ್ನು ಕಲ್ಪಿಸಲು ಸರ್ಕಾರಕ್ಕಿರುನ ತೊಂದರೆಗಳೇನು;

ಉ) ಈ ಬಡಾವಣೆಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಇದುವರೆಗೂ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ ; ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ಪೂರ್ಣ ಮಾಹಿತಿ ನೀಡುವುದು) ?

ಶ್ರೀ ವಿ. ಸೋಮಣ್ಣ (ವಸತಿ ಸಚಿವರು):

ಅ) ಮದ್ದೂರಿನ ಚಾಮನಹಳ್ಳಿ ಬಡಾವಣೆಯಲ್ಲಿ ಸರ್ವೆ ನಂ. 457, 458, 459, 460/1ಎ, 460/1ಬಿ ಮತ್ತು 461/1 ಒಟ್ಟು 7.30 ಎಕರೆ ಜಮೀನು ಭೂಸ್ವಾಧೀನಪಡಿಸಿಕೊಂಡಿದೆ.